ಸಾಕ್ಷಿಯನ್ನು ದಿನಾಂಕ **23-06-2025** ರಂದು ಕರೆದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿಯ ಪರವಾಗಿ ಶ್ರೀಮತಿ ಸಿ.ವಿ.ಜಿ. ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿಯಾಗಿದ್ದು, ನನ್ನ ಸಾಕ್ಷ್ಯದ ಹೇಳಿಕೆಯನ್ನು ಪ್ರಮಾಣಪತ್ರದ ರೂಪದಲ್ಲಿ ನನ್ನ ಹೇಳಿಕೆಯಂತೆ ತಯಾರಿಸಿ ಸಲ್ಲಿಸಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿರುತ್ತವೆ. ಸದರಿ ಈ ಪ್ರಮಾಣಪತ್ರದಲ್ಲಿರುವ ಸಹಿ ನನ್ನದೇ ಇರುತ್ತದೆ.

ನನ್ನ ವಾದಕ್ಕೆ ಪೂರಕವಾಗಿ ದಿನಾಂಕ 31-05-2021 ರ ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಅದರಲ್ಲಿರುವ ಪ್ರತಿವಾದಿಯ ಸಹಿಯನ್ನು ನಿಪಿ-1(ಎ) ಎಂದು, ದಿನಾಂಕ 30-06-2021 ರಂದು ಹೆಚ್.ಡಿ.ಎಫ್.ಸಿ. ಬ್ಯಾಂಕ್, ಮಂಗಳೂರು ರವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದಿನಾಂಕ 18-08-2022 ರಂದು ವಕೀಲರ ಮೂಲಕ ಪ್ರತಿವಾದಿಗೆ ನೀಡಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಅಂಚೆ ಕಚೇರಿಯ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

( **ವಕೀಲರ ಕೋರಿಕೆ ಮೇರೆಗೆ ಸಾಕ್ಷಿಯ ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ನೀಡಲಾಯಿತು.** )

ನನ್ನ ಉಕ್ತಲೇಖನದ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ ಎಂದು ಒಪ್ಪಿರುತ್ತಾರೆ.

ಸಾಕ್ಷಿಯ ಸಹಿ

ವ್ಯವಹಾರಿಕ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾಯಿಕ ದಂಡಾಧಿಕಾರಿಯವರು, ಸುಳ್ಯ, ದ.ಕ.